ಕೋಟಾಕ್ಕೆ ಸೀಟುಗಳು ಸೇರ್ಪಡೆಯಾಗುತ್ತವೆ, ಹಾಗೂ ಸದರಿ ಸಾಲಿಗೆ ಯಾವುದೇ ನೂತನ ದಂತ ಕಾಲೇಜಿಗೆ ಕೇಂದ್ರ ಸರ್ಕಾರ ಅನುಮತಿಸಿಲ್ಲ.

3723 (3798): ಶ್ರೀ ಕಟ್ಟಾಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ)
ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ರಾಜ್ಯದಲ್ಲಿ ಹೊಸದಾಗಿ ಪ್ರಾರಂಭಿಸಲಾಗುವ 6 ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಸ್ವಾಯತ್ತ ಸಂಸ್ಥೆಗಳನ್ನಾಗಿ ಮಾಡಿರುವುದು ನಿಜವಲ್ಲವೇ;

ಆ. ರಾಜ್ಯದಲ್ಲಿ ಈಗಾಗಲೇ ಬಳ್ಳಾರಿಯ ವಿಮ್ಸ್, ಹುಬ್ಬಳ್ಳಿಯ ಕಿಮ್ಸ್ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಸ್ವಾಯತ್ತ ಸಂಸ್ಥೆಗಳಾಗಿ ಕೆಲಸ ನಿರ್ವಹಿಸುತ್ತಿರುವುದು ನಿಜವಲ್ಲವೇ;

ಇ. ಬೆಂಗಳೂರಿನ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಮೈಸೂರು ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಅವುಗಳ ಬೋಧಕ ಆಸ್ಪತ್ರೆಗಳನ್ನು ಸ್ವಾಯತ್ತ ಸಂಸ್ಥೆಗಳನ್ನಾಗಿ ಪರಿವರ್ತಿಸಿ, ಇವುಗಳ ಆಡಳಿತ ಸುಧಾರಿಸಲು ಹಾಗೂ ರೋಗಿಗಳಿಗೆ, ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಒದಗಿಸಲು ಸರ್ಕಾರ ಕ್ರಮಕೈಗೊಳ್ಳತ್ತದೆಯೇ?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ. ಹೌದು.

ಆ. ಹೌದು.

ಇ. ಬೆಂಗಳೂರು ವೈದ್ಯಕೀಯ ಕಾಲೇಜನ್ನು, ಮೈಸೂರು ವೈದ್ಯಕೀಯ ಕಾಲೇಜನ್ನು ಮತ್ತು ಸರ್ಕಾರಿ ದಂತ ಕಾಲೇಜನ್ನು ಸ್ವಾಯುತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

3724 (3799) : ಶ್ರೀ ಕಟ್ಟಾಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ)
ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ರಾಜ್ಯದಲ್ಲಿ ಪಠ್ಯಪುಸ್ತಕಗಳ ವಿತರಣೆಯಲ್ಲಿ ವಿಳಂಬವಾಗಲು ಕಾರಣಗಳೇನು?

ಆ. ಇಲ್ಲಿಯವರೆಗೆ ಎಷ್ಟು ಸಾವಿರ ಪುಸ್ತಕಗಳನ್ನು ಸರ್ಕಾರಿ ಹಾಗೂ ಖಾಸಗೀ ಶಾಲೆಗಳಿಗೆ ಸರಬರಾಜು ಮಾಡಲಾಗಿದೆ.

ಇ. ಎಷ್ಟು ಪಠ್ಯ ಪುಸ್ತಕಗಳ ಸರಬರಾಜು ಮಾಡಬೇಕಾಗಿದೆ;

ಈ. ಪಠ್ಯಪುಸ್ತಕಗಳ ವಿಳಂಬದಿಂದ ತ್ರೈಮಾಸಿಕ ಪರೀಕ್ಷೆಯ ಅನುಷ್ಠಾನಕ್ಕೆ ತೊಂದರೆಯಾಗಿಲ್ಲವೇ;

ಉ. ಪಠ್ಯ ಪುಸ್ತಕಗಳನ್ನು ನಿಗದಿ ಪಡಿಸಿದ ವೇಳೆಯೊಳಗೆ ಸರಬರಾಜು ಮಾಡದ ಮುದ್ರಕರ ಸಂಖ್ಯೆ ಎಷ್ಟು;

ಊ. ಹಾಗಿದ್ದರೆ, ಅವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ. ಉಚಿತ ವಿತರಣೆಯ ಪಠ್ಯಪುಸ್ತಕಗಳು ಜೂನ್ ಪ್ರಾರಂಭದಲ್ಲಿ ವಿತರಣೆಯಾಗಿದೆ. ಮಾರಾಟ ವಿಭಾಗದ ಪಠ್ಯಪುಸ್ತಕಗಳ ಸರಬರಾಜಿನಲ್ಲಿ ಪ್ರಾರಂಭದಲ್ಲಿ ಸ್ವಲ್ಪ ವಿಳಂಬವಾಗಿದೆ.

ಆ. ಸರ್ಕಾರಿ ಶಾಲೆಗಳಿಗೆ 288 ಲಕ್ಷ ಪಠ್ಯಪುಸ್ತಕಗಳನ್ನು ಸರಬರಾಜು ಮಾಡಿದೆ. ಖಾಸಗಿ ಶಾಲಾ ವಿದ್ಯಾರ್ಥಿಗಳಿಗೆ 190 ಲಕ್ಷ ಪಠ್ಯಪುಸ್ತಕಗಳು ಮಾರಾಟಕ್ಕೆ ಬಿಡುಗಡೆಯಾಗಿವೆ.

ಇ. ಉಚಿತ ಪಠ್ಯಪುಸ್ತಕಗಳು ಪೂರ್ಣ ಸರಬರಾಜಾಗಿದ್ದು, ಮಾರಾಟ ವಿಭಾಗದ ಪಠ್ಯಪುಸ್ತಕಗಳು ಸಾಕಷ್ಟು ಮಾರುಕಟ್ಟೆಗೆ ಬಿಡುಗಡೆಯಾಗಿದೆ.

ಈ. ಇಲ್ಲ.

ಉ. ಉಚಿತ ಪಠ್ಯಪುಸ್ತಕಗಳನ್ನು ಎಲ್ಲಾ ಮುದ್ರಕರೂ ಸರಬರಾಜು ಮಾಡಿರುತ್ತಾರೆ. ಆದರೆ, ಎಲ್ಲಾ ಮುದ್ರಕರಮಾರಾಟ ವಿಭಾಗದ ಒಂದೆರಡು ಶೀರ್ಷಿಕೆಗಳ ಪ್ರತಿಗಳು ತಡವಾಗಿ ಸರಬರಾಜಾಗಿದೆ.

ಊ. ಟೆಂಡರ್ ನಿಯಮಗಳ ಪ್ರಕಾರ ಈಗಾಗಲೇ ಕ್ರಮ ಕೈಗೊಳ್ಳಲಾಗುತ್ತಿದೆ.

3725 (3800): ಶ್ರೀ ಕಟ್ಟಾಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ)

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್, ಮಧ್ಯಮ, ಸಣ್ಣ ಪ್ರಮಾಣದ ಕೈಗಾರಿಕೆಗಳು ಮತ್ತು ಮೂಲಭೂತ ಅಭಿವೃದ್ಧಿ ಸಚಿವರು) (ಮಾನ್ಯ ಕಂದಾಯ ಸಚಿವರಿಂದ ಅಧಿಕಾರಿಸಲ್ಪಟ್ಟಿದೆ) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ರಾಜ್ಯಕ್ಕೆ ಕೇಂದ್ರ ಸರ್ಕಾರ ಕಳೆದ ಎರಡು ವರ್ಷಗಳಿಂದ ಕೂಲಿಗಾಗಿ ಕಾಳು ಯೋಜನೆಯಡಿಯಲ್ಲಿ ಯಾವ ಯಾವ ಜಿಲ್ಲೆಗಳಿಗೆ ಹಣ ಬಿಡುಗಡೆ ಮಾಡಿದೆ;

ಆ. ಈ ರೀತಿ ಬಿಡುಗಡೆ ಮಾಡಿದ ಹಣದಲ್ಲಿ ಸರ್ಕಾರ ಇಲ್ಲಿಯವರೆಗೆ ಖರ್ಚು ಮಾಡಿದ ಹಣವೆಷ್ಟು;